# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 418 (481) |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 30/01/2026 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕುಮಾರ್ ನಾಯಕ್ ವರದಿಯಂತೆ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಸಹ ಶಿಕ್ಷಕರಿಗೆ ಹಾಗೂ ಉಪನ್ಯಾಸಕರಿಗೆ ಈಗಾಗಲೇ 2016 ರಿಂದ ಒಂದು Increment ನೀಡಿರುವಂತೆ, ವಸತಿ ಶಾಲೆಗಳ ಶಿಕ್ಷಕರಿಗೆ ನೀಡಲಾಗಿಲ್ಲ ಎಂಬುದು ನಿಜವೇ; | ಸರ್ಕಾರದ ಆದೇಶ ಸಂಖ್ಯೆ:ಇಡಿ 78 ಎಸ್‌ಎಲ್‌ಬಿ 2016, ಬೆಂಗಳೂರು, ದಿನಾಂಕ:15.04.2016 ರಲ್ಲಿ ಶಿಕ್ಷಣ ಇಲಾಖೆಯ ಅಂದಿನ ಕಾರ್ಯದರ್ಶಿಗಳಾದ ಶ್ರೀ.ಜಿ. ಕುಮಾರ ನಾಯಕ್ ಐ.ಎ.ಎಸ್., ರವರ ನೇತೃತ್ವದ ಸಮಿತಿಯ ವರದಿಯಲ್ಲಿನ ಶಿಫಾರಸ್ಸಿನಂತೆ ಸರ್ಕಾರಿ/ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ಮತ್ತು ಮುಖ್ಯ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ದಿನಾಂಕ:01-06-2016ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಿ ಆದೇಶಿಸಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ:ಇಡಿ 78 ಎಸ್‌ಎಲ್‌ಬಿ 2016, ಬೆಂಗಳೂರು, ದಿನಾಂಕ:03.03.2017 ಸಾರ್ವಜನಿಕ ಶಿಕ್ಷಣ ಇಲಾಖೆಯ ಆದೇಶದಲ್ಲಿ ಈ ಸೌಲಭ್ಯವನ್ನು ಪ್ರೌಢಶಾಲಾ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪ ಪ್ರಾಂಶುಪಾಲರು, ದೈಹಿಕ ಶಿಕ್ಷಕರು, ವೃತ್ತಿ ಶಿಕ್ಷಕರುಗಳಿಗೆ ದಿನಾಂಕ:01.06.2016 ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಿ ಆದೇಶಿಸಿದೆ. ಸರ್ಕಾರದ ಆದೇಶ ಸಂಖ್ಯೆ: ಇಡಿ 145 ಎಸ್‌ಎಲ್‌ಬಿ 2017 (ಭಾಗ-1), ಬೆಂಗಳೂರು, ದಿನಾಂಕ:20.09.2017 ಸರ್ಕಾರಿ ಆದೇಶದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಡಯಟ್ ಉಪನ್ಯಾಸಕರು, ಉಪ ನಿರ್ದೇಶಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಮುಂತಾದ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ತತ್ಸಮಾನ ಹುದ್ದೆಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ದಿನಾಂಕ:01.06.2016 ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಿ ಆದೇಶಿಸಿದೆ.<br><br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ಖಾಯಂ ಶಿಕ್ಷಕರು ಶ್ರೀ. ಜಿ, ಕುಮಾರನಾಯಕ ಭಾ.ಆ.ಸೇ, ಅಂದಿನ ಸರ್ಕಾರ ಕಾರ್ಯದರ್ಶಿಗಳು(ಪ್ರಾಥಮಿಕ ಮತ್ತು ಪ್ರೌಢ), ಶಿಕ್ಷಣ ಇಲಾಖೆರವರ ಶಿಫಾರಸ್ಸಿನಂತೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡುವಂತೆ ಕೋರಿ ಮಾನ್ಯ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿದ್ದು, ಸದರಿ ಪ್ರಕರಣವನ್ನು ಆಲಿಸಿದ ಮಾನ್ಯ ಉಚ್ಚನ್ಯಾಯಾಲಯವು ದಿನಾಂಕ:20.04.018 ರಂದು ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡುವಂತೆ W.P. No:102821-102825/2018 (S-RES) ರಲ್ಲಿ ಆದೇಶಿಸಿದೆ. ಈ ಹಿನ್ನೆಲೆಯಲ್ಲಿ, ಸಂಘದ ಅಧೀನದ ವಸತಿ ಶಾಲೆಗಳ ಪ.ಜಾತಿ, ಪ.ಪಂಗಡ ಹಾಗೂ ಹಿಂದುಳಿದ ವರ್ಗದ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿಗೆ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳ ಬದ್ಧತೆಯನ್ನು ಹೆಚ್ಚಿಸಲು ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡುವುದು ಸಹಕಾರಿಯಾಗುತ್ತದೆ. ಸಾರ್ವಜನಿಕ ಶಿಕ್ಷಣ ಇಲಾಖೆಯ ಪ್ರೌಢಶಾಲಾ |

| | | |
|---|---|---|
| | | ಶಿಕ್ಷಕರು/ಮುಖ್ಯೋಪಾಧ್ಯಾಯರು ಮತ್ತು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ ವಸತಿ ಶಾಲೆಗಳ ಪ್ರೌಢ ಶಾಲಾ ಶಿಕ್ಷಕರು/ಪ್ರಾಂಶುಪಾಲರು ಇವರುಗಳ ನಡುವಿನ ವೇತನ ತಾರತಮ್ಯವನ್ನು ಹೋಗಲಾಡಿಸಲು ವಸತಿ ಶಾಲೆಗಳ ಪ್ರಾಂಶುಪಾಲರು ಹಾಗೂ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ದಿನಾಂಕ:01.06.2016 ರಿಂದ ಅನ್ವಯವಾಗುವಂತೆ ಮಂಜೂರಾತಿ ನೀಡಿ ಆದೇಶ ಹೊರಡಿಸುವಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಕೋರಿದ್ದು, ಇದನ್ನು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗಿ, ಆರ್ಥಿಕ ಇಲಾಖೆಯು ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲವೆಂದು ತಿಳಿಸಲಾಗಿದೆ. |
| ಆ) | Increment ನೀಡದೇ ಇದ್ದಲ್ಲಿ ಕಾರಣಗಳೇನು, ಹಾಗೂ Increment ನೀಡುವ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು; | ಆರ್ಥಿಕ ಇಲಾಖೆಯ ಹಿಂಬರಹದನ್ವಯ ಪತ್ರ ಸಂಖ್ಯೆ: ಸಕಇ 144 ಮೊದೇಶಾ 2017 ದಿನಾಂಕ:19.11.2018.ರಲ್ಲಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಯ ಶಿಕ್ಷಕರುಗಳಿಗೆ ಶ್ರೀ.ಜಿ.ಕುಮಾರ ನಾಯಕ ಭಾ.ಆ.ಸೇ., ರವರ ವರದಿಯನ್ವಯ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲವೆಂದು ಈ ಕೆಳಕಂಡಂತೆ ತಿಳಿಸಲಾಗಿದೆ.<br><br>1) ದಿನಾಂಕ:15-04-2016ರ ಸರ್ಕಾರಿ ಆದೇಶ ಸಂಖ್ಯೆ:ಇಡಿ 78 ಎಸ್‌ಎಲ್‌ಬಿ 2016ರಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ/ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ಮತ್ತು ಮುಖ್ಯ ಶಿಕ್ಷಕರುಗಳಿಗೆ ದಿನಾಂಕ: 01-06-2016ರಿಂದ ಜಾರಿಗೆ ಬರುವಂತೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು 2012ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ಮಂಜೂರು ಮಾಡಿ ಆದೇಶ ಹೊರಡಿಸಿರುತ್ತದೆ. ಆದರೆ, ರಾಜ್ಯ ಸರ್ಕಾರವು ಹೊರಡಿಸಿದ ದಿನಾಂಕ:01-03-2018 ಮತ್ತು 19-04-2018ರ ಸರ್ಕಾರಿ ಆದೇಶ ಸಂಖ್ಯೆ:ಆಇ 6 ಎಸ್‌ಆರ್‌ಪಿ 2018 ರನ್ವಯ 2018 ರ ಪರಿಷ್ಕೃತ ವೇತನ ಶ್ರೇಣಿ ನಿಯಮಗಳನ್ನು ದಿನಾಂಕ:01-07-2017 ರಿಂದ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಲಾಗಿರುತ್ತದೆ. ಅಂದರೆ, 2012ರ ಪರಿಷ್ಕೃತ ವೇತನ ಶ್ರೇಣಿಯು ದಿನಾಂಕ:01-07-2017 ರಿಂದ ನಿರಶನಗೊಂಡಿರುತ್ತದೆ.<br><br>2) ತದನಂತರದಲ್ಲಿ ಸರ್ಕಾರಿ ಶಿಕ್ಷಕರುಗೆ ಹೆಚ್ಚುವರಿ ವೇತನ ಮಂಜೂರು ಮಾಡುವ ತನ್ನ ನೀತಿಯನ್ನು ಪುನರ್ ಪರಿಶೀಲಿಸಿರುತ್ತದೆ. ಅದರಂತೆ ರಾಜ್ಯ ಸರ್ಕಾರವು ದಿನಾಂಕ:20-10-2018ರ ಸರ್ಕಾರಿ ಆದೇಶ ಸಂಖ್ಯೆ: ಆಇ 28 ಎಸ್‌ಆರ್‌ಪಿ 2018ರಲ್ಲಿ ಆದೇಶಗಳನ್ನು ಹೊರಡಿಸಿದ್ದು, ಸದರಿ ಆದೇಶದ ಕಂಡಿಕೆ 4ರಲ್ಲಿ ಶಿಕ್ಷಣ ಇಲಾಖೆಯ ಶಿಕ್ಷಕರುಗಳಿಗೆ ಮಂಜೂರು ಮಾಡಲಾದ ದಿನಾಂಕ: 15-04-2018ರ ಸರ್ಕಾರಿ ಆದೇಶ ಸಂಖ್ಯೆ: ಇಡಿ 78 ಎಸ್‌ಎಲ್‌ಬಿ 2016 ಮತ್ತು ಇಡಿ 87 ಡಿಜಿಡಿ 2016ಗಳನ್ನು ದಿನಾಂಕ:01-08-2018 ರಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿರುತ್ತದೆ.<br><br>3) ಪ್ರಕರಣಕ್ಕೆ ಸಂಬಂದಿಸಿದಂತೆ ಈ ಮೇಲ್ಕಂಡ ವಾಸ್ತಾವಂಶಗಳ ಹಿನ್ನಲೆಯಲ್ಲಿ 2018ರ ಪರಿಷ್ಕೃತ ವೇತನ ಶ್ರೇಣಿ ನಿಯಮಗಳ ಜಾರಿಯಿಂದಾಗಿ ಹಾಗೂ 2012ರ ಪರಿಷ್ಕೃತ ವೇತನ ಶ್ರೇಣಿ ನಿಯಮಗಳು ಮತ್ತು ದಿನಾಂಕ:15-04-2016ರ ಹೆಚ್ಚುವರಿ ವೇತನ ವೇತನ ಬಡ್ತಿ ಮಂಜೂರಾತಿ ಆದೇಶಗಳು ಪ್ರಸ್ತುತ ಅಸ್ತಿತ್ವದಲ್ಲಿ ಇಲ್ಲದಿರುವುದರಿಂದ ಮಾನ್ಯ ನ್ಯಾಯಾಲಯದ ನಿರ್ದೇಶನದಂತೆ ಪ್ರಕರಣವನ್ನು ಪರಿಶೀಲಿಸಿದಾಗ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಬರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ |

| | | |
|---|---|---|
| | | ಸಿಬ್ಬಂದಿಗಳಿಗೆ ಶಿಕ್ಷಣ ಇಲಾಖೆಯ ಶಿಕ್ಷಕರುಗಳಿಗೆ ನೀಡುತ್ತಿದ್ದ ವೇತನ ಬಡ್ತಿಯನ್ನು ಮಂಜೂರು ಮಾಡಲು ಬರುವುದಿಲ್ಲ.<br>4) ಮುಂದುವರೆದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಬರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳು ಮತ್ತು ಶಿಕ್ಷಣ ಇಲಾಖೆಯ ಶಿಕ್ಷಕರುಗಳ ಹುದ್ದೆಗಳನ್ನು ಪರಸ್ಪರ ಹೋಲಿಸಲು ಬರುವುದಿಲ್ಲ. ಅಷ್ಟೇ ಅಲ್ಲದೇ, ಶಿಕ್ಷಣ ಇಲಾಖೆಯ ಶಿಕ್ಷಕರಿಗೆ ಮಂಜೂರು ಮಾಡಿದ್ದ ಹೆಚ್ಚುವರಿ ವೇತನ ಬಡ್ತಿ ನಿರ್ಧಾರವು ಸರ್ಕಾರದ ನೀತಿ ನಿರ್ಣಯ ನಿರ್ಧಾರವಾಗಿದ್ದು, (Policy Decision) ಇದನ್ನು ವಸತಿ ಶಾಲೆಯ ಶಿಕ್ಷಕರುಗಳಿಗೆ ವಿಸ್ತರಿಸಿ ಅನ್ವಯಿಸಲು ಬರುವುದಿಲ್ಲ ಎಂದು ಹಿಂಬರಹ ನೀಡಲಾಗಿರುತ್ತದೆ.<br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಬರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ ಶಿಕ್ಷಣ ಇಲಾಖೆಯ ಶಿಕ್ಷಕರುಗಳಿಗೆ ನೀಡಲಾಗುತ್ತಿರುವ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡುವಂತೆ ಕೋರಿ ಕರ್ನಾಟಕ ರಾಜ್ಯದ 7 ನೇ ವೇತನ ಆಯೋಗಕ್ಕೆ ಪ್ರಸ್ತಾಪಿಸಲಾಗಿರುತ್ತದೆ.<br>ದಿನಾಂಕ:10.10.2025 ರಂದು ನಡೆದ 84ನೇ ಆಡಳಿತ ಮಂಡಳಿಯ ಸಭೆಯ ತೀರ್ಮಾನದಂತೆ ಕಾರ್ಯನಿರ್ವಾಹಕ ನಿರ್ದೇಶಕರು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರಿಂದ ಪ್ರಸ್ತಾವನೆ ಸ್ವೀಕೃತವಾಗಿದ್ದು, ಸದರಿ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |
| ಇ) | ವಸತಿ ಶಾಲೆಗಳಲ್ಲಿ ಸಹ ಶಿಕ್ಷಕರಿಗೆ ಸುಮಾರು 13 ವರ್ಷಗಳಿಂದ ಉಪನ್ಯಾಸಕರ ಹುದ್ದೆಗೆ ಪದೋನ್ನತಿ ನೀಡದಿರಲು ಕಾರಣಗಳೇನು; ಈ ಕುರಿತು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು; ಪ್ರಸ್ತುತ ಬಡ್ತಿ ನೀಡುವ ಬಗೆಗಿನ ಪ್ರಕ್ರಿಯೆ ಯಾವ ಹಂತದಲ್ಲಿದೆ; | ಶಿಕ್ಷಕರ ವೃಂದದಿಂದ ಖಾಲಿ ಇರುವ ಉಪನ್ಯಾಸಕರ ಹುದ್ದೆಗೆ ಮುಂಬಡ್ತಿ ನೀಡುವ ಕುರಿತು ದಿನಾಂಕ: 04-12-2025 ರಂದು ಇಲಾಖಾ ಮುಂಬಡ್ತಿ ಸಮಿತಿ ಸಭೆಯನ್ನು ಕರೆಯಲಾಗಿದ್ದು, ಮುಂಬಡ್ತಿ ಸಮಿತಿ ಸಭೆಯ ನಿರ್ಣಯದಂತೆ ದಿನಾಂಕ: 22.01.2026 ರಂದು ಅರ್ಹರಿರುವ 209 ವಿವಿಧ ಶಿಕ್ಷಕ ವೃಂದದ ಶಿಕ್ಷಕರಿಗೆ ಉಪನ್ಯಾಸಕರ ಹುದ್ದೆಗೆ ಮುಂಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಲು ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಹಮ್ಮಿಕೊಂಡು, ಎಸ್. ಎಸ್. ಎಲ್. ಸಿ ಮತ್ತು ಪಿ.ಯು.ಸಿ ವಾರ್ಷಿಕ ಪರೀಕ್ಷೆಗೆ ಫಲಿತಾಂಶವನ್ನು ಉತ್ತಮಗೊಳಿಸುವ ದೃಷ್ಟಿಯಿಂದ ದಿನಾಂಕ:10.04.2026 ರಿಂದ ಜಾರಿಗೆ ಬರುವಂತೆ ಕೌನ್ಸಿಲಿಂಗ್ ಪ್ರಕ್ರಿಯೆಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಂಡಿರುವ ಒಟ್ಟು 182 ಶಿಕ್ಷಕರಿಗೆ ಉಪನ್ಯಾಸಕರ ಹುದ್ದೆಗೆ ಮುಂಬಡ್ತಿ ಆದೇಶವನ್ನು ಹೊರಡಿಸಲಾಗಿರುತ್ತದೆ. |

**SWD/37/MDS/2026**

**(ಡಾ: ಹೆಚ್.ಸಿ ಮಹದೇವಪ್ಪ)**

ಸಮಾಜ ಕಲ್ಯಾಣ ಸಚಿವರು.